ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE: 20/9/20

### ನಾಲ್ವರು ಸಚಿವರಿಗೆ ಪಾಸಿಟಿವ್ । ಈಗಷ್ಟೇ ಚೇತರಿಸಿಕೊಳ್ಳುತ್ತಿರುವ ಕೆಲವರು

# ಕೊರೊನಾ ಕರಿನೆರಳಲ್ಲಿ ಅಧಿವೇಶನ

**ವಿಕ ಸುದ್ದಿಲೋಕ** ಬೆಂಗಳೂರು 19
ಸೋಮವಾರದಿಂದ ಆರಂಭಗೊಳ್ಳಲಿರುವ ರಾಜ್ಯ ವಿಧಾನ ಮಂಡಲದ ಅಧಿವೇಶನದ ಕೊರೊನಾ ಛಾಯೆ ಆವರಿಸಿದ್ದು, ಡಿಸಿಎಂ ಡಾ.ಸಿ.ಎನ್. ಅಶ್ವತ್ಥನಾರಾಯಣ ಸೇರಿದಂತೆ ನಾಲ್ವರು ಸಚಿವರಿಗೆ ಕೋವಿಡ್-19 ದೃಢಪಟ್ಟಿದೆ.

ಅಧಿವೇಶನ ಹಿನ್ನೆಲೆಯಲ್ಲಿ ಉಭಯ ಸದನದ ಸದಸ್ಯರು, ಅಧಿಕಾರಿಗಳು, ಪತ್ರಕರ್ತರಿಗೆ ಕೋವಿಡ್ ಪರೀಕ್ಷೆ ಕಡ್ಡಾಯಗೊಳಿಸಲಾಗಿದೆ. ಈ ಹಿನ್ನೆಲೆಯಲ್ಲಿ ಸಚಿವರು, ಶಾಸಕರು ಪರೀಕ್ಷೆಗೆ ಒಳಪಡುತ್ತಿದ್ದು, ನಾಲ್ಕು ದಿನದ ಅವಧಿಯಲ್ಲಿ ನಾಲ್ವರು ಸಚಿವರಿಗೆ ಕೊರೊನಾ ದೃಢಪಟ್ಟಿದೆ. ಗೃಹ ಸಚಿವ ಬಸವರಾಜ್ ಬೊಮ್ಮಾಯಿ, ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ. ಗೋಪಾಲಯ್ಯ, ನಗರಾಭಿವೃದ್ಧಿ ಸಚಿವ ಬೈರತಿ ಬಸವರಾಜ್ ಅವರಿಗೆ ಸೋಂಕು ದೃಢಪಟ್ಟಿದ್ದು ಚಿಕಿತ್ಸೆ ಪಡೆಯುತ್ತಿದ್ದಾರೆ. ಇತ್ತೀಚೆಗಷ್ಟೇ ಚೇತರಿಸಿಕೊಂಡಿರುವ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯಿತ್ ರಾಜ್ ಸಚಿವ ಕೆ.ಎಸ್. ಈಶ್ವರಪ್ಪ, ಕಾರ್ಮಿಕ ಸಚಿವ ಶಿವರಾಂ ಹೆಬ್ಬಾರ್ ಮತ್ತೊಮ್ಮೆ ಪರೀಕ್ಷೆಗೆ ಒಳಪಟ್ಟಿದ್ದು ನೆಗೆಟಿವ್ ವರದಿ ಬಂದಿದೆ.

**ಚರ್ಚೆ ಸಾಧ್ಯವೇ?:** ಇದೆಲ್ಲದರ ಜತೆಗೆ ಈ ಬಾರಿಯ ಅಧಿವೇಶನದಲ್ಲಿ ಒಟ್ಟು 31 ವಿಧೇಯಕಗಳು ಮಂಡನೆಯಾಗಲಿವೆ. ಈ ಪೈಕಿ ಎಪಿಎಂಸಿ, ಭೂ ಸುಧಾರಣಾ ಕಾಯಿದೆ, ಕೈಗಾರಿಕಾ ಅಭಿವೃದ್ಧಿ, ಸಾಂಕ್ರಾಮಿಕ ರೋಗ ನಿಯಂತ್ರಣ, ವಿಶ್ವವಿದ್ಯಾಲಯ ವಿಧೇಯಕ ಸೇರಿದಂತೆ 19 ಸುಗ್ರೀವಾಜ್ಞೆಗಳು ವಿಧೇಯಕ ರೂಪದಲ್ಲಿ ಮಂಡನೆಯಾಗಲಿವೆ. ಇಷ್ಟೊಂದು ಸಂಖ್ಯೆಯ ವಿಧೇಯಕಗಳು ಅತಿ ಕಡಿಮೆ ಅವಧಿಯ ಕಲಾಪದಲ್ಲಿ ಮಂಡನೆಯಾಗುತ್ತಿರುವುದು ಇತ್ತೀಚಿನ ದಿನಗಳಲ್ಲಿ ಮೊದಲು. ಜತೆಗೆ ಕೋವಿಡ್, ನೆರೆ, ಜಿಎಸ್‌ಟಿ ಸೇರಿದಂತೆ ಅನೇಕ ಸಾರ್ವಜನಿಕ ಹಿತಾಸಕ್ತಿ ವಿಚಾರಗಳ ಬಗ್ಗೆ ಚರ್ಚೆ ನಡೆಸಬೇಕಿದ್ದು, ಪ್ರಶ್ನೋತ್ತರ, ಗಮನಸೆಳೆಯುವ ಸೂಚನೆ, ಶೂನ್ಯವೇಳೆ ಸೇರಿದಂತೆ ಇನ್ನಿತರ ಅಂಶಗಳ ಬಗ್ಗೆಯೂ ಗಮನ ನೀಡಬೇಕಾಗುತ್ತದೆ. ಹೀಗಾಗಿ ಕಲಾಪಕ್ಕೆ ಕೊರೊನಾ ಜತೆಗೆ ಸಮಯದ ಅಭಾವವೂ ಕಾಡುತ್ತಿದೆ.

ಈ ಹಿನ್ನೆಲೆಯಲ್ಲಿ ಅಧಿವೇಶನದ ಅವಧಿ ವಿಸ್ತರಿಸುವಂತೆ ಕಾಂಗ್ರೆಸ್ ಒತ್ತಾಯಿಸಿದೆಯಾದರೂ ಸರಕಾರ ಮಣಿದಿಲ್ಲ. ಈ ಮಧ್ಯೆ ಪ್ರಮುಖ ಸಚಿವರಿಗೆ ಕೋವಿಡ್ ಕಾಣಿಸಿಕೊಂಡಿರುವುದರಿಂದ ಕಲಾಪ ವಿಸ್ತರಣೆಗೆ ಪ್ರತಿಪಕ್ಷಗಳು ಒತ್ತಾಯ ಮಾಡುವ ಸಾಧ್ಯತೆ ಕಡಿಮೆ ಇದೆ. ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸೇರಿದಂತೆ ಪ್ರಮುಖ ನಾಯಕರು ಶನಿವಾರ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕೋವಿಡ್ ಪರೀಕ್ಷೆ ಮಾಡಿಸಿಕೊಂಡಿದ್ದಾರೆ.

## 75 ಶಾಸಕರಿಗೆ ಸೋಂಕು



**ಫೆಬ್ರವರಿ ತಿಂಗಳಿಂದ ಇದುವರೆಗೆ 75 ಶಾಸಕರಿಗೆ ಕೊರೊನಾ ಸೋಂಕು ಕಾಣಿಸಿಕೊಂಡಿದೆ. ಈ ಪೈಕಿ ಬಹುತೇಕರು ಗುಣಮುಖರಾಗಿದ್ದಾರೆ. ತೀವ್ರ ಅನಾರೋಗ್ಯಕ್ಕೆ ಗುರಿಯಾಗಿದ್ದವರಲ್ಲಿ, ಸುಸ್ತು ಇನ್ನೂ ಇದೆ. ಈ ಹಿನ್ನೆಲೆಯಲ್ಲಿ ಅಧಿವೇಶನ ಸಂದರ್ಭದಲ್ಲಿ ವಿಶೇಷ ಕಾಳಜಿ ತೆಗೆದುಕೊಳ್ಳಲಾಗುತ್ತಿದೆ. ಲಕ್ಷಣರಹಿತ ಸೋಂಕು ಉಳ್ಳವರಿಗೂ ಕಲಾಪ ಪ್ರವೇಶ ನಿರ್ಬಂಧಿಸಲಾಗಿದೆ. ಅಧಿಕಾರಿಗಳು, ಪತ್ರಕರ್ತರು, ಸಚಿವಾಲಯ ಸಿಬ್ಬಂದಿ, ಸಚಿವರು, ಶಾಸಕರ ಪಿ.ಎ, ಗನ್‌ಮ್ಯಾನ್‌ಗಳಿಗೂ ಕೋವಿಡ್ ಪರೀಕ್ಷೆ ಕಡ್ಡಾಯಗೊಳಿಸಲಾಗಿದೆ.**